ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ ಕಛೇರಿಯಲ್ಲಿ ದಿನಾಂಕ: 22-01-2021 ರಂದು ನಡೆದ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)ಪಿಆರ್/35/2020-21, ದಿನಾಂಕ: 21-09-2020 ರ ಆದೇಶದಂತೆ ಜನವರಿ-2021 ರ ಮಾಹೆಯ ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 22-01-2021 ರಂದು ನೆಡೆಸಲಾಯಿತು.

**ಸಭೆಗೆ ಹಾಜರಿದ್ದವರ ವಿವರಗಳು**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಸನ್ಮಾನ್ಯ ಶ್ರೀ. ಎನ್.ಎ. ಹ್ಯಾರೀಸ್ ರವರು | ಮಾನ್ಯ ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ |
| 2 | ಬಿ. ಡಿ. ಮಂಜುನಾಥ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು ವಾರ್ಡ್-112 (ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ) |
| 3 | ಎನ್.ಎಸ್. ಪ್ರಕಾಶ್ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 112 |
| 4 | ಅಪ್ಪುರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ-ಶಾಂತಿನಗರ ವಿಭಾಗ |
| 5 | ಕೆ. ನಾಗರಾಜ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ. |
| 6 | ಮಂಜುನಾಥ | ಸಹಾಯಕ ಅಭಿಯಂತರರು ಎಸ್-3, ಬೆಸ್ಕಾಂ |
| 7 | ಚಂದ್ರಪ್ಪ | ಸಹಾಯಕ ಕಂದಾಯ ಅಧಿಕಾರಿ ದೊಮ್ಮಲೂರು ಉಪ ವಿಭಾಗ |
| 8 | ಸಿ ನಂಜುಂಡಯ್ಯ | ಕಿರಿಯ ಅಭಿಯಂತರರು, ಬೋರ್‌ವೆಲ್ |
| 9 | ಎಲ್. ಸಗಯನಾಥನ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |
| 10 | ಪುರುಷೋತ್ತಮ | ಸಮಿತಿ ಸದಸ್ಯರು & ಕಿರಿಯ ಆರೋಗ್ಯ ಪರಿವೀಕ್ಷಕರುವಾರ್ಡ್ ಸಂಖ್ಯೆ: 112 |
| 11 | ಬಿ ಚಂದ್ರಶೇಖರ್ | ಸಹಾಯಕ ಅಭಿಯಂತರರು, ಬೃಹತ್ ನೀರುಗಾಲುವೆ, ಬಿಬಿಎಂಪಿ |
| 12 | ಮಮತ. ಎಂ.ಹೆಚ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ |
| 13 | ಶಶಿಕುಮಾರ್ | ಕೆಲಸ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |

| | | |
|---|---|---|
| 14 | ಗಾಯತ್ರಿ | ಟೈಲರಿಂಗ್ ಶಿಕ್ಷಕರು,<br>ವಾರ್ಡ್ ಸಂಖ್ಯೆ: 112 ದೊಮ್ಮಲೂರು, ಬಿಬಿಎಂಪಿ |
| 15 | ದೇವರಾಜು | ಅರಣ್ಯ ಇಲಾಖೆ (ಪೂರ್ವ) |
| 16 | ಮಂಜಪ್ಪ ಹೆಚ್. ಎಸ್. | ಸಹಾಯಕ ಅಭಿಯಂತರರು<br>ಸ್ಟ್ರೀಟ್ ಲೈಟ್ ವಿಭಾಗ, ಬಿಬಿಎಂಪಿ |
| **ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಸಮಿತಿ ಸದಸ್ಯರು ಮತ್ತು ಸಾರ್ವಜನಿಕರು** | | |
| 1 | ವಾಸು | ವಾರ್ಡ್ ಸಮಿತಿ ಸದಸ್ಯರು |
| 2 | ಪುಲಿಕೇಶಿ ರೆಡ್ಡಿ | ವಾರ್ಡ್ ಸಮಿತಿ ಸದಸ್ಯರು |
| 3 | ವಿಜಯ್ ಎಂ ಬಿ | ವಾರ್ಡ್ ಸಮಿತಿ ಸದಸ್ಯರು |
| 4 | ಕಲ್ಯಾಣಿ | ವಾರ್ಡ್ ಸಮಿತಿ ಸದಸ್ಯರು |

ದಿನಾಂಕ: 22-01-2021 ರಂದು ಪೂರ್ವಹ್ನ 11-00 ಗಂಟೆಗೆ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಶ್ರೀ. ಎನ್. ಎಸ್. ಪ್ರಕಾಶ್, ಕಾರ್ಯದರ್ಶಿಗಳು ಮತ್ತು ವಾರ್ಡಿನ ಸಹಾಯಕ ಅಭಿಯಂತರರು ಸಭೆಗೆ ಆಗಮಿಸಿದ್ದ ಸನ್ಮಾನ್ಯ ಶಾಸಕರನ್ನು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳನ್ನು ಮತ್ತು ವಾರ್ಡ್ ಸಮಿತಿ ಸದಸ್ಯರುಗಳನ್ನು, ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಹಾಗೂ ವಾರ್ಡಿನ ನಿವಾಸಿಗಳನ್ನು ಸಭೆಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಿದರು.

ಸಭೆಯ ಪ್ರಾರಂಭದಲ್ಲಿ, ಕಾರ್ಯದಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಓದಿದರು, ಮತ್ತು ಹಿಂದಿನ ಸಭೆಯಲ್ಲಿ ಸಾರ್ವಜನಿಕರು ತಿಳಿಸಿದ ಸಮಸ್ಯೆಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಸಭೆಗೆ ವಿವರಿಸಿದರು.

<u>ಸಭೆಯಲ್ಲಿ ಪ್ರಮುಖವಾಗಿ ಕೆಳಕಂಡ ವಿಷಯಗಳನ್ನು ಚರ್ಚಿಸಲಾಯಿತು.</u>

1. **ಶ್ರೀ ಕೃಷ್ಣಯ್ಯ (ಪೋಲೀಸ್) ರವರು ಚರ್ಚಿಸಿದ ವಿಷಯಗಳು:**
   a) ಬಿ.ಡಿ.ಎ. ಬಡಾವಣೆ ಹತ್ತಿರ ಹಾಕಿರುವ ಡಸ್ಟ್‌ಬಿನ್‌ಗಳ ಕುರಿತು.
   b) ಹಳೆ ವಿಮಾನ ನಿಲ್ದಾಣ ರಸ್ತೆಯಲ್ಲಿ ಬಸ್ ಬೇ ನಿರ್ಮಿಸುವ ಕುರಿತು.
   c) ವಾರ್ಡಿನಲ್ಲಿ ಅಳವಡಿಸಿರುವ ಸಿ.ಸಿ. ಕ್ಯಾಮರಾಗಳ ನಿಯಂತ್ರಣಾ ಕೊಠಡಿಯ ಕುರಿತು.
   d) ಬೆಸ್ಕಾಂ ಅಧಿಕಾರಿಗಳು ಸಮಸ್ಯೆ ಪರಿಹರಿಸಿದ್ದು ಧನ್ಯವಾದ ತಿಳಿಸಿದರು.

2. ಶ್ರೀ. ವಿಜಯ್ ಎಂ. ಬಿ. ರವರು ಮನವಿ ಸಲ್ಲಿಸಿ ಇಸ್ರೋ ಕಾಲೋನಿ ಸ್ಲಂ ಪ್ರದೇಶಕ್ಕೆ ಕುಡಿಯುವ ನೀರಿನ Cistern ಗಳನ್ನು ಸ್ಥಳಾಂತರಿಸುವ ಕುರಿತು.
3. ಟ್ರಾಫಿಕ್ ಪೋಲೀಸರು ದೊಮ್ಮಲೂರು ವಾರ್ಡಿನ ಹಳೆ ವಿಮಾನ ನಿಲ್ದಾಣ ರಸ್ತೆಯ ಡಾ॥ ರಾಜ್ ಕುಮಾರ್ ವೃತ್ತ ಮತ್ತು ಅಟ್ಟಿ ಮಾರಮ್ಮ ವೃತ್ತ (ಅರಳಿಕಟ್ಟೆ) ಹತ್ತಿರ ವಿಶ್ರಾಂತಿ ಪಡೆಯಲು ಪೋಲೀಸ್ ಚೌಕಿ **(Police Umbrella)** ಸ್ಥಾಪಿಸಿಕೊಡುವಂತೆ ಮನವಿ ಮಾಡಿರುತ್ತಾರೆ.

# ಸಭೆಯ ನಡಾವಳಿಗಳು

1. **ಶ್ರೀ ಕೃಷ್ಣಯ್ಯ (ಪೋಲೀಸ್) ರವರು ಚರ್ಚಿಸಿದ ವಿಷಯಗಳು:**

**ಎ)** ಬಿ.ಡಿ.ಎ. ಬಡಾವಣೆ ಹತ್ತಿರ ಹಾಕಿರುವ ಡಸ್ಟ್‌ಬಿನ್‌ಗಳನ್ನು ಇದುವರೆಗೂ ತೆರವು ಮಾಡಿರುವುದಿಲ್ಲ, ಆದುದರಿಂದ, ಈ ಸ್ಥಳದಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಿ, ಸದರಿ ಸಿ.ಸಿ. ಕ್ಯಾಮರಾಗಳ ಸಂಪರ್ಕವನ್ನು ತಮ್ಮ ಮೊಬೈಲ್‌ಗೆ ಪಡೆದು, ಈ ಸ್ಥಳದಲ್ಲಿ ಅನಧಿಕೃತವಾಗಿ ಕಸ ವಿಲೇವಾರಿ ಮಾಡುವುದನ್ನು ನಿಯಂತ್ರಿಸುತ್ತಿರುವುದಾಗಿ ತಿಳಿಸಿರುತ್ತಾರೆ.

ಈ ಬಗ್ಗೆ ಸಭೆಯಲ್ಲಿ ಹಾಜರಿದ್ದು ಪಾಲಿಕೆ ಘನತ್ಯಾಜ್ಯ ನಿರ್ವಹಣೆ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು, ಈಗಾಗಲೇ ಡಸ್ಟ್‌ಬಿನ್ ಸ್ಥಳಾಂತರಿಸಲು ಅನುಮೋದನೆಗಾಗಿ ಕಡತವನ್ನು ಕೇಂದ್ರ ಕಛೇರಿಗೆ ಕಳುಹಿಸಿಕೊಡಲಾಗಿದೆ, ಅನುಮತಿ ದೊರೆತ ಕೂಡಲೇ ಸ್ಥಳಾಂತರಿಸಲಾಗುವುದು ಎಂದು ತಿಳಿಸಿದರು. ಹಾಗೂ ಸ್ವತಃ ಸದರಿ ಸ್ಥಳದಲ್ಲಿ ಕಸ ವಿಲೇವಾರಿಯನ್ನು ನಿಯಂತ್ರಣ ಮಾಡುತ್ತಿರುವ ಬಗ್ಗೆ ಮಾನ್ಯ ಶಾಸಕರು ಕೃಷ್ಣಯ್ಯ ರವರಿಗೆ ಅಭಿನಂದನೆ ತಿಳಿಸಿದರು.

ಬಿ) ಹಳೆ ವಿಮಾನ ನಿಲ್ದಾಣ ರಸ್ತೆಯಲ್ಲಿ ಬಸ್ ಬೇ ನಿರ್ಮಿಸುವ ಕುರಿತು ಬಹಳಾ ದಿನಗಳಿಂದ ಪ್ರಯತ್ನಿಸುತ್ತಿದ್ದು, ಇದುವರೆಗೂ ಯಾವುದೇ ಪ್ರಯೋಜನವಾಗಿರುವುದಿಲ್ಲವೆಂದು ತಿಳಿಸಿದರು.

ಈ ಬಗ್ಗೆ ಮಾತನಾಡಿದ ಮಾನ್ಯ ಶಾಸಕರು, ಹಳೆ ವಿಮಾನ ನಿಲ್ದಾಣ ರಸ್ತೆಯಲ್ಲಿ ಬಸ್‌ಬೇ ನಿರ್ಮಾಣ ಕುರಿತು ಈಗಾಗಲೇ ಬಿ.ಎಂ.ಟಿ.ಸಿ. ಸಂಸ್ಥೆಯೊಂದಿಗೆ ಚರ್ಚಿಸಲಾಗಿರುತ್ತದೆ. ಮತ್ತು ಮುಂದಿನ ದಿನಗಳಲ್ಲಿ ಅಗತ್ಯ ಕ್ರಮಕೈಗೊಳ್ಳಲಾಗುವುದು ಸಹ ತಿಳಿಸಿರುತ್ತಾರೆ. ಹಾಗೂ ಮುಂದಿನ ವಾರ್ಡ್ ಸಮಿತಿ ಸಭೆಗೆ ಈ ಬಗ್ಗೆ ಚರ್ಚಿಸುವ ಸಲುವಾಗಿ ಬಿ.ಎಂ.ಟಿ.ಸಿ. ಸಂಸ್ಥೆಯಿಂದ ಅಧಿಕಾರಿಗಳನ್ನು ಸಭೆಗೆ ಆಹ್ವಾನಿಸಲು ನೋಡಲ್ ಅಧಿಕಾರಿಗಳಿಗೆ ತಿಳಿಸಿರುತ್ತಾರೆ.

ಸಿ) ವಾರ್ಡಿನಲ್ಲಿ ಅಳವಡಿಸಿರುವ ಸಿ.ಸಿ. ಕ್ಯಾಮರಾಗಳ ನಿಯಂತ್ರಣಕ್ಕಾಗಿ ಡಾ|| ರಾಜ್‌ಕುಮಾರ್ ಪಾರ್ಕ್‌ನಲ್ಲಿ ನಿರ್ಮಿಸಿರುವ ನಿಯಂತ್ರಣಾ ಕೊಠಡಿಯಲ್ಲಿ ಪರಿಶೀಲಿಸಲಾಗಿ, ಹಿಂದಿನ ಸಭೆಯಲ್ಲಿ ತಿಳಿಸಿದಂತೆ ಕೊಠಡಿಯಲ್ಲಿ ಗೋಡೆಯನ್ನು ನಿರ್ಮಿಸಿ ನಿಯಂತ್ರಣಾ ಕೊಠಡಿಯನ್ನು ಪ್ರತ್ಯೇಕಗೊಳಿಸಿರುತ್ತಾರೆಂದು ತಿಳಿಸಿರುತ್ತಾರೆ.

ಈ ಬಗ್ಗೆ ಮಾನ್ಯ ಶಾಸಕರು ಮಾತನಾಡಿ, ವಾರ್ಡಿನಲ್ಲಿ ಅಳವಡಿಸಿರುವ ಎಲ್ಲಾ ಸಿ.ಸಿ. ಕ್ಯಾಮರಾಗಳ ನಿಯಂತ್ರಣವನ್ನು ಪೋಲೀಸ್ ಇಲಾಖೆಗೆ ವರ್ಗಾಯಿಸಲು ಈಗಾಗಲೇ ಎ.ಸಿ.ಪಿ. ಯವರೊಂದಿಗೆ ಚರ್ಚಿಸಲಾಗಿರುತ್ತದೆ. ಮುಂದಿನ ದಿನಗಳಲ್ಲಿ ಈ ಬಗ್ಗೆ ಅಗತ್ಯ ಕ್ರಮವಹಿಸುವುದಾಗಿ ತಿಳಿಸಿರುತ್ತಾರೆಂದು ಸಭೆಗೆ ಮಾಹಿತಿ ನೀಡಿದರು.

2. ಶ್ರೀ. ವಿಜಯ್ ಎಂ. ಬಿ. ರವರು ಮನವಿ ಸಲ್ಲಿಸಿ ಇಸ್ರೋ ಕಾಲೋನಿ ಸ್ಲಂ ಪ್ರದೇಶದ ಜನರು ಕುಡಿಯುವ ನೀರನ್ನು ಒಳಚರಂಡಿ ಹತ್ತಿರ ಹಿಡಿದುಕೊಳ್ಳುತ್ತಿರುತ್ತಾರೆ, ಆದ್ದರಿಂದ, ಕುಡಿಯುವ ನೀರಿನ Cistern ಗಳನ್ನು ಕಾಲೋನಿ ಒಳಗೆ ಸ್ಥಳಾಂತರಿಸಲು, ಸಮರ್ಪಕ ನೀರಿನ ವ್ಯವಸ್ಥೆ ಕಲ್ಪಿಸಲು ಮನವಿ ಮಾಡಿರುತ್ತಾರೆ.

ಈ ಬಗ್ಗೆ ಸ್ಥಳ ಪರಿಶೀಲನೆ ಮಾಡಿ ಅಗತ್ಯ ಕ್ರಮವಹಿಸುವಂತೆ ಮಾನ್ಯ ಶಾಸಕರು ನೋಡಲ್ ಅಧಿಕಾರಿಗಳಿಗೆ ಸೂಚನೆ ನೀಡಿರುತ್ತಾರೆ.

3. ಟ್ರಾಫಿಕ್ ಪೋಲೀಸರು ದೊಮ್ಮಲೂರು ವಾರ್ಡಿನ ಹಳೆ ವಿಮಾನ ನಿಲ್ದಾಣ ರಸ್ತೆಯ ಡಾ|| ರಾಜ್ ಕುಮಾರ್ ವೃತ್ತ ಮತ್ತು ಅಬ್ಬಿ ಮಾರಮ್ಮ ವೃತ್ತ (ಅರಳಿಕಟ್ಟೆ) ಹತ್ತಿರ ವಿಶ್ರಾಂತಿ ಪಡೆಯಲು ಪೋಲೀಸ್ ಚೌಕಿ **(Police Umbrella)** ಸ್ಥಾಪಿಸಿಕೊಡುವಂತೆ ಮನವಿ ಮಾಡಿರುತ್ತಾರೆ.

ಈ ಬಗ್ಗೆ ಮಾತನಾಡಿದ ಮಾನ್ಯ ಶಾಸಕರು, ಈಗಾಗಲೇ ಈ ಬಗ್ಗೆ ಕ್ರಮವಹಿಸಿದ್ದು, ಕೂಡಲೇ ಹಳೆ ವಿಮಾನ ನಿಲ್ದಾಣ ರಸ್ತೆಯ ಡಾ॥ ರಾಜ್ ಕುಮಾರ್ ವೃತ್ತ ಮತ್ತು ಅಟ್ಟಿ ಮಾರಮ್ಮ ವೃತ್ತ (ಅರಳಿಕಟ್ಟೆ) ಹತ್ತಿರ ವಿಶ್ರಾಂತಿ ಪಡೆಯಲು ಪೋಲೀಸ್ ಚೌಕಿ **(Police Umbrella)** ಸ್ಥಾಪಿಸಿಕೊಡಲಾಗುವುದು ಎಂದು ತಿಳಿಸಿದರು.

ಕೊನೆಯದಾಗಿ ಕಾರ್ಯದರ್ಶಿಯವರು ಮಾನ್ಯ ಶಾಸಕರಿಗೆ ಮತ್ತು ಸಭೆಗೆ ಹಾಜರಾಗಿದ್ದ ಅಧಿಕಾರಿಗಳಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವಂದಿಸಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳ ಅಪ್ಪಣೆಯ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

AE-112

**ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು**
**ವಾರ್ಡ್ ಸಂಖ್ಯೆ: 112 ದೊಮ್ಮಲೂರು ಮತ್ತು**
**ಸಹಾಯಕ ಕಾರ್ಯಪಾಲಕ ಅಭಿಯಂತರರು**
**ದೊಮ್ಮಲೂರು ಉಪ ವಿಭಾಗ**
**ಬಿ.ಬಿ.ಎಂ.ಪಿ**

<u>ಪ್ರತಿಯನ್ನು:</u>

1. ಮಾನ್ಯ ಆಡಳಿತಗಾರರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗೆ ಸಲ್ಲಿಸಿದೆ.
6. ಮಾನ್ಯ ಮುಖ್ಯ ಅಭಿಯಂತರರು (ಪೂರ್ವ) ರವರ ಅಮೂಲ್ಯ ಅವಗಾಹನೆಗಾಗಿ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.